# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2023 (2318)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಡಿ.ಡಿ. ನೀಡುವ ಕುರಿತು

(ಅ) 2020-21ರ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಿದ್ಯಾರ್ಥಿಗಳು ಬ್ಯಾಂಕ್‌ಗಳ ಮೂಲಕ ಶುಲ್ಕ ಪಾವತಿಸಿದ್ದರೂ ಶುಲ್ಕ ಪ್ರಾಧಿಕಾರಕ್ಕೆ ಬಂದಿಲ್ಲ ಎಂಬ ಕಾರಣಕ್ಕೆ ಎಷ್ಟು ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ಮತ್ತು ವೈದ್ಯಕೀಯ ಶಿಕ್ಷಣದ ಕೌನ್ಸಿಲಿಂಗ್‌ಗೆ ಹಾಜರಾಗಲು ಅವಕಾಶ ನಿರಾಕರಿಸಲಾಗಿದೆ; (ವಿವರ ನೀಡುವುದು)

(ಆ) ಬ್ಯಾಂಕಿನ ಮೂಲಕ ಶುಲ್ಕ ಪಾವತಿಸಿದ ದಾಖಲೆಗಳನ್ನು ನೀಡಿದ ಬಳಿಕವು ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜಿಗೆ ಪ್ರವೇಶಾತಿ ಪಡೆಯಲು ಸಾಧ್ಯವಾಗಿಲ್ಲ ; (ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಬ್ಯಾಂಕು ಅಥವಾ ಕೆ.ಇ.ಎ. ಯಿಂದ ಆದ ತಪ್ಪಿಗೆ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜಿಗೆ ಸೇರಲು ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?